**6 ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು.**

| | |
|---|---|
| ಸಿಸಿ ನಂ. | 687/2021 |
| ಸಾಕ್ಷಿಯ ಹೆಸರು | ಸುಕನ್ಯ |
| ತಂದೆ ಹೆಸರು | ವೆಂಕಟಪ್ಪ |
| ವಯಸ್ಸು | 38 ವರ್ಷ |
| ಉದ್ಯೋಗ | ಗೃಹಿಣಿ |
| ವಾಸಸ್ಥಳ | ಕಮ್ಮನಾಯಕನಳ್ಳಿ, ರಾಮನಗರ ಜಿಲ್ಲೆ |

**ಸಾಕ್ಷಿಯನ್ನು ದಿನಾಂಕಃ 22.01.2026 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಹಿರಿಯ ಸರ್ಕಾರಿ ಸಹಾಯಕ ಅಭಿಯೋಜಕರಿಂದಃ**

1 ನೇ ಆರೋಪಿ ನನ್ನ ಗಂಡ, 2 ಮತ್ತು 3 ನೇ ಆರೋಪಿ ನನ್ನ ಮಾವ ಮತ್ತು ಅತ್ತೆ. ಈಗ ತೋರಿಸುವ ದೂರು ಮತ್ತು ಪಂಚನಾಮೆ ಮೇಲೆ ನನ್ನ ಸಹಿ ಇದೆ. ದೂರು ನಿಪಿ-1, ಪಂಚನಾಮೆ ನಿಪಿ-2, ಸಾಕ್ಷಿಯ ಸಹಿಗಳನ್ನು ನಿಪಿ-1 ಎ ಮತ್ತು 2 ಎ ಎಂದು ಗುರುತಿಸಲಾಗಿದೆ. ಆರೋಪಿ ನನಗೆ ಹೊಡೆಬಡೆ ಮಾಡಿರುವುದಿಲ್ಲ, ದೈಹಿಕವಾಗಿ ಮತ್ತು ಮಾನಸಿಕವಾಗಿ ಕಿರುಕುಳ ನೀಡಿರುವುದಿಲ್ಲ, ವರದಕ್ಷಿಣೆ ತರುವಂತೆ ನನಗೆ ಒತ್ತಾಯಿಸಿರುವುದಿಲ್ಲ ಮತ್ತು ವರದಕ್ಷಿಣೆಯ ಬೇಡಿಕೆ ಮಾಡಿರುವುದಿಲ್ಲ ಹಾಗೂ ನನಗೆ ಜೀವ ಬೆದರಿಕೆ ಹಾಕಿರುವುದಿಲ್ಲ. ನಿ.ಪಿ.1 ಮತ್ತು 2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಹಿ.ಸ.ಸ. ಅಭಿಯೋಜಕರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿವರ್ತಿಸಿ ಪಾಟೀ ಸವಾಲನ್ನು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯ ಸಾಕ್ಷ್ಯವನ್ನು ಗಮನಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೊಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಿದೆ)**

**ಪಾಟೀ ಸವಾಲುಃ ಮಾನ್ಯ ಹಿರಿಯ ಸರ್ಕಾರಿ ಸಹಾಯಕ ಅಭಿಯೋಜಕರಿಂದಃ**

ನನ್ನ ಮದುವೆ 1 ನೇ ಆರೋಪಿಯವರೊಂದಿಗೆ ಮದುವೆ ಆದ ನಂತರದಿಂದ ಆರೋಪಿತರು ನನಗೆ ಹೆಚ್ಚಿನ ವರದಕ್ಷಿಣೆ ತರುವಂತೆ ಒತ್ತಾಯಿಸಿ, ನನಗೆ ಹೊಡೆದು ಬಡೆದು ನನಗೆ ದೈಹಿಕವಾಗಿ ಹಾಗೂ ಮಾನಸಿಕವಾಗಿ ಕಿರುಕುಳ ನೀಡಿರುತ್ತಾರೆಂದು ಈಗ ನನಗೆ ಓದಿ ಹೇಳಲಾದ ನಿ.ಪಿ.1 ರಂತೆ ನಾನು ಪೊಲೀಸರಿಗೆ ಆರೋಪಿತರ ವಿರುದ್ಧ ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ. ತದನಂತರ

ಪೊಲೀಸರು ಕೃತ್ಯ ನಡೆದ ಸ್ಥಳಕ್ಕೆ ಬಂದಾಗ ನಾನು ಸ್ಥಳದಲ್ಲಿ ಹಾಜರಿದ್ದು ನಿ.ಪಿ.2 ರಂತೆ ಕೃತ್ಯ ನಡೆದ ಸ್ಥಳವನ್ನು ತೋರಿಸಿ ಈಗ ನನಗೆ ಓದಿ ಹೇಳಲಾದ ನಿ.ಪಿ.2 ರಂತೆ ಅದರಲ್ಲಿ ನಾನು ಭಾಗವಹಿಸಿರುತ್ತೇನೆಂದರೆ ಸರಿಯಲ್ಲ. ನಾನು ಮತ್ತು ಆರೋಪಿತರು ಪರಸ್ಪರ ಒಪ್ಪಿಗೆಯಿಂದ ವಿಚ್ಛೇದನ ಪಡೆದುಕೊಂಡಿದ್ದು ಈಗ ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆ ಕಾರಣಕ್ಕಾಗಿ ನಿ.ಪಿ.1 ರಿಂದ 2 ರಲ್ಲಿ ನಡೆದಿರುವ ಸಂಗತಿಗಳು ನಿಜವಾಗಿದ್ದರೂ ಕೂಡ ಅವುಗಳ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲವೆಂದು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿರುತ್ತೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿಯಿಂದಃ**

ಏನೂ ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸ. ಇ. ಎ. ಒ.

6 ನೇ ಅ ಮು ನ್ಯಾ ದಂ ನ್ಯಾ